**<u>ದಿನಾಂಕಃ 10.12.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಪಾಟೀ ಸವಾಲು:- ಪ್ರತಿವಾದಿ ಪರ ಶ್ರೀ ಸಿ.ಎಂ.ಕೆ. ವಕೀಲರಿಂದಃ</u>**

1) ಮೃತ ಜಗದೀಶ್ ರವರು 1961 ರಿಂದ 1972 ರವರೆಗೆ ಶಾನುಭೋಗರಾಗಿ ಕೆಲಸ ಮಾಡುತ್ತಿದ್ದರು ಎಂಬ ಬಗ್ಗೆ ನನಗೆ ಗೊತ್ತಿಲ್ಲ. ವಾದಿಯ ಕುಟುಂಬದಲ್ಲಿ ಶಾನುಭೋಗರು ಯಾರೂ ಇರುವುದಿಲ್ಲ. ದಾವಾ ಸ್ವತ್ತು ಶಾನುಭೋಗ್ ಸರ್ಕಾರಿ ಇನಾಮ್ತಿ ಜಮೀನು ಎಂಬ ಬಗ್ಗೆ ನನಗೆ ಗೊತ್ತಿಲ್ಲ. ದಾವಾ ಸ್ವತ್ತು ಪ್ರಸ್ತುತ ಯಾರ ಹೆಸರಿನಲ್ಲಿ ಇದೆ ಎಂಬ ನನಗೆ ಗೊತ್ತಿಲ್ಲ.

2) ನನ್ನ ಜಮೀನಿನ ಸರ್ವೆ ನಂಬರ್ ನನಗೆ ಗೊತ್ತಿಲ್ಲ. ದಾವಾ ಸ್ವತ್ತಿನ ಸರ್ವೆ ನಂಬರ್ ಏನು ಎಂದು ನನಗೆ ಯಾರೂ ಹೇಳಿಲ್ಲ ಆದರೆ ಅದರ ಸರ್ವೆ ನಂಬರ್ 13 ಎಂದು ನಾನೇ ತಿಳಿದುಕೊಂಡಿರುತ್ತೇನೆ. ಜಗದೀಶ್ ರವರೇ ದಾವಾ ಸ್ವತ್ತಿನ ಸ್ವಾಧೀನದಲ್ಲಿ ಇದ್ದು ಆತನ ಮರಣದ ನಂತರ ಆತನ ಮಕ್ಕಳು ಸ್ವಾಧೀನದಲ್ಲಿ ಇದ್ದು ಬೆಳೆಯನ್ನು ಬೆಳೆಯುತ್ತಿದ್ದಾರೆ ಎಂಬ ಬಗ್ಗೆ ನನಗೆ ಗೊತ್ತಿಲ್ಲ. ವಾದಿಯ ತಂದೆ ಮೂಗೂರಯ್ಯ. ವಾದಿ ನನ್ನ ಅಕ್ಕ. ಆಕೆಗೆ ಸಹಾಯ ಮಾಡುವ ಸಲುವಾಗಿ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ:- ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಗಣಕೀಕರಣ ಮಾಡಲಾಯಿತು).

ಓ. ಹೆ. ಕೇ. ಸರಿ ಇದೆ.

**ಪ್ರಧಾನ ದಿವಾಣಿ ಹಾಗೂ ಪ್ರ.ದ.ನ್ಯಾ. ದಂ.ಗಳ**
**ನ್ಯಾಯಾಲಯ, ಚನ್ನಪಟ್ಟಣ.**